ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಮಾರ್ಗಸೂಚಿ ದರಕ್ಕಿಂತ ಕಡಿಮೆ ದರಕ್ಕೆ ಸ್ಥಿರಾಸ್ಥಿ ನೋಂದಣಿ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) -

1141 (1214) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2019ನೇ ಸಾಲಿನಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸ್ಥಿರಾಸ್ಥಿಗಳ ಮಾರಾಟ/ಖರೀದಿ ನೋಂದಣಿಯನ್ನು ಎಷ್ಟು ಸಮಯದವರೆಗೆ ನಿಷೇಧಿಸಲಾಗಿತ್ತು; ಮತ್ತು ಯಾವ ಕಾರಣಕ್ಕೆ ನಿಷೇಧಿಸಲಾಗಿತ್ತು;

(ಆ) ಮಾರ್ಚ್ 2018ಕ್ಕೆ ಕೊನೆಗೊಂಡ ಆರ್ಥಿಕ ವರ್ಷಕ್ಕೆ ಸಂಬಂಧಿಸಿದ ಸಿಎಜಿ ವರದಿಯಲ್ಲಿ ಬೆಂಗಳೂರು ನಗರ ಜಿಲ್ಲೆ ಮತ್ತು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರಕ್ಕೆ ಸ್ಥಿರಾಸ್ಥಿ ಮಾರಾಟ/ಖರೀದಿ ನೋಂದಣಿ ಮಾಡಿರುವುದರಿಂದ ಮುದ್ರಾಂಕ ಮತ್ತು ನೋಂದಣಿ ಶುಲ್ಕದಲ್ಲಿ 450 ಕೋಟಿಗೂ ಹೆಚ್ಚು ಮೊತ್ತ ಸರ್ಕಾರಕ್ಕೆ ನಷ್ಟವಾಗಿರುವ ಬಗ್ಗೆ ವರದಿಯಾಗಿದ್ದು, ಈ ಅವ್ಯವಹಾರದಲ್ಲಿ ಪಾಲ್ಗೊಂಡ ಉಪ ನೋಂದಣಾಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸ್ಥಿರಾಸ್ಥಿಗಳನ್ನು ನೋಂದಣಿ ಮಾಡಲು ಇರುವ ನೋಂದಣಿ ಕಛೇರಿಗಳ ಸಂಖ್ಯೆ ಎಷ್ಟು; (ವಿಳಾಸದೊಂದಿಗೆ ವಿವರ ನೀಡುವುದು)

(ಈ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೋಂದಣಾಧಿಕಾರಿಯವರು ಎಷ್ಟು ವರ್ಷಗಳಿಂದ ಬೆಂಗಳೂರು ನಗರದಲ್ಲೇ ಕರ್ತವ್ಯ ನಿರ್ವಹಿಸುತ್ತಿದ್ದಾರೆ; 10 ವರ್ಷಗಳಿಗೂ ಅಧಿಕ ವರ್ಷದಿಂದ ಬೆಂಗಳೂರಿನಲ್ಲೇ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು? (ಹೆಸರಿನೊಂದಿಗೆ ಮಾಹಿತಿ ನೀಡುವುದು)